# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 296 (286) |
| ಸದಸ್ಯರ ಹೆಸರು | ಶ್ರೀ ಸುನೀಲ್ ಸುಬ್ರಮಣಿ ಎಂ ಪಿ |
| ಉತ್ತರಿಸುವ ದಿನಾಂಕ | 03-02-2021 |
| ಉತ್ತರಿಸುವವರು | ಹಿಂದೂ ಧಾರ್ಮಿಕ ಮತ್ತು ಧರ್ಮಾದಾಯ ದತ್ತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು ಜಿಲ್ಲೆ, ಚಾಮುಂಡಿ ಬೆಟ್ಟದಲ್ಲಿರುವ ಮುಜರಾಯಿ ದೇವಾಲಯಗಳು ಯಾವುವು; ಇಲ್ಲಿಗೆ ಬರುವ ಭಕ್ತಾಧಿಗಳಿಗೆ ಇಲಾಖೆ ವತಿಯಿಂದ ಒದಗಿಸಲಾಗಿರುವ ಅನುಕೂಲತೆಗಳು ಯಾವುವು; (ವಿವರ ನೀಡುವುದು) | ಮೈಸೂರು ಜಿಲ್ಲೆ, ಚಾಮುಂಡಿ ಬೆಟ್ಟದಲ್ಲಿ ಧಾರ್ಮಿಕ ದತ್ತಿ ಇಲಾಖೆಗೆ ಸೇರಿದ ಒಟ್ಟು 03 ದೇವಾಲಯಗಳಿವೆ. ವಿವರ ಕೆಳಕಂಡಂತಿದೆ.<br>1. ಶ್ರೀ ಚಾಮುಂಡೇಶ್ವರಿ ದೇವಸ್ಥಾನ,<br>2. ಶ್ರೀ ಮಹಾಬಲೇಶ್ವರ ಸ್ವಾಮಿ ದೇವಸ್ಥಾನ<br>3. ಶ್ರೀ ನಾರಾಯಣ ಸ್ವಾಮಿ ದೇವಸ್ಥಾನ.<br><br>ದೇವಾಲಯಕ್ಕೆ ಬರುವ ಭಕ್ತಾಧಿಗಳಿಗಾಗಿ ಇಲಾಖಾ ವತಿಯಿಂದ ಈ ಕೆಳಕಂಡ ಅನುಕೂಲತೆಗಳನ್ನು ಒದಗಿಸಲಾಗಿದೆ.<br>ಅ) ಭಕ್ತಾಧಿಗಳ ವಾಸ್ತವ್ಯಕ್ಕಾಗಿ 20 ಕೊಠಡಿಗಳ ಅತಿಥಿ ಗೃಹ ಇದ್ದು, ಭಕ್ತಾಧಿಗಳಿಗೆ ಕೊಠಡಿಗಳನ್ನು ಬಾಡಿಗೆ ಆಧಾರದಲ್ಲಿ ನೀಡಲಾಗುತ್ತಿದೆ.<br>ಆ) ವಾಹನ ನಿಲುಗಡೆಗೆ ಬಹುಮಹಡಿ ಪಾರ್ಕಿಂಗ್ ಕಟ್ಟಡದ ವ್ಯವಸ್ಥೆ ಕಲ್ಪಿಸಲಾಗಿದೆ.<br>ಇ) ದೇವಾಲಯದ ಬಳಿಯಲ್ಲಿ ಹಾಗೂ ಬಹುಮಹಡಿ ಕಟ್ಟಡದ ಬಳಿಯಲ್ಲಿ ಉತ್ತಮವಾದ ಶೌಚಾಲಯಗಳ ವ್ಯವಸ್ಥೆ ಇರುತ್ತದೆ.<br>ಈ) ದೇವಾಲಯದ ಮುಂಭಾಗದಲ್ಲಿ ಹಾಗೂ ದಾಸೋಹ ಭವನದ ಮುಂಭಾಗದಲ್ಲಿ ಎರಡು ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಇರುತ್ತದೆ.<br>ಉ) ದೇವಾಲಯದಲ್ಲಿ ಭದ್ರತೆ ದೃಷ್ಟಿಯಿಂದ ಸಿ.ಸಿ. ಕ್ಯಾಮರಾಗಳನ್ನು ಅಳವಡಿಸಲಾಗಿದೆ.<br>ಊ) ಇತರೆ ಅಗತ್ಯವಾದ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿರುತ್ತದೆ. |

.....2

| | | |
|---|---|---|
| ಆ) | ಇಲ್ಲಿಗೆ ಬರುವ ಭಕ್ತಾಧಿಗಳಿಗೆ ಕೈ-ಕಾಲುಗಳನ್ನು ತೊಳೆಯಲು ನೀರಿನ ಅನುಕೂಲತೆಯನ್ನು ಮಾಡಲಾಗಿದೆಯೇ; ಇಲ್ಲದಿದ್ದಲ್ಲಿ ನೀರಿನ ಅನುಕೂಲತೆಯನ್ನು ಮಾಡಲು ಯಾವ ಕ್ರಮ ಕೈಗೊಳ್ಳಲಾಗುತ್ತದೆ (ವಿವರ ನೀಡುವುದು) | ಶ್ರೀ ಚಾಮುಂಡೇಶ್ವರಿ ದೇವಸ್ಥಾನ ಮುಂಭಾಗದಲ್ಲಿ ಸಾರ್ವಜನಿಕ ಭಕ್ತಾಧಿಗಳು ಕೈ-ಕಾಲುಗಳನ್ನು ತೊಳೆಯಲು ನೀರಿನ ವ್ಯವಸ್ಥೆ ಮಾಡಲಾಸಸಗಿದೆ ಹಾಗೂ ದೇವಸ್ಥಾನದ ಪಕ್ಕದಲ್ಲಿ ಸಾರ್ವಜನಿಕ ನಲ್ಲಿಗಳ ಮೂಲಕ ನೀರಿನ ವ್ಯವಸ್ಥೆ ಕಲ್ಪಿಸಲಾಗಿದೆ. |
| ಇ) | ದೇವರ ದರ್ಶನಕ್ಕೆ ಬೆಟ್ಟ ಹತ್ತಿ ಬರುವ ಭಕ್ತರಿಗೆ ತಿರುಪತಿಯ ಮಾದರಿಯಲ್ಲಿ ಶೀಘ್ರ ದರ್ಶನಕ್ಕೆ ಚೀಟಿ ನೀಡುವ ಪದ್ಧತಿ ಕೈಗೊಳ್ಳಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು? (ವಿವರ ನೀಡುವುದು) | ದೇವಾಲಯದಲ್ಲಿ ಪ್ರಸ್ತುತ ಬೆಟ್ಟ ಹತ್ತಿ ಬರುವ ಭಕ್ತರಿಗೆ ತಿರುಪತಿಯ ಮಾದರಿಯಲ್ಲಿ ಶೀಘ್ರ ದರ್ಶನಕ್ಕೆ ಚೀಟಿ ನೀಡುವ ಪದ್ಧತಿಯಂತೆ ಪ್ರತ್ಯೇಕ ವ್ಯವಸ್ಥೆ ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |

ಸಂಖ್ಯೆ: ಕಂಇ 24 ಮುಸಪ್ರ 2021

**(ಕೋಟಾ ಶ್ರೀನಿವಾಸ ಪೂಜಾರಿ)**
ಹಿಂದೂ ಧಾರ್ಮಿಕ ಮತ್ತು ಧರ್ಮಾದಾಯ ದತ್ತಿ
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.